

ಅರುಣ ಪಿ. ಭಟ್ಟ

## ವಾರಭವಿಷ್ಯ: 28.11.2024ರಿಂದ 04.12.2024ರವರೆಗೆ




ನಿಮ್ಮ ಕೆಲಸದಿಂದ ವಿಶ್ವಾಸಾರ್ಹತೆ ಹಾಗೂ ಪ್ರತಿಭೆ ಹೆಚ್ಚಾಗುತ್ತದೆ. ಕೆಲವರು ನಿಮ್ಮನ್ನು ಅವಮಾನಕ್ಕೆ ಗುರಿ ಮಾಡಲಿದ್ದಾರೆ. ವಾರದ ಕೊನೆಗೆ ಸಂತೋಷವಾಗಿ ಸಮಯ ಕಳೆಯಲಿದ್ದೀರಿ. ನಿಮ್ಮ ಕೆಲಸದ ಜೊತೆಜೊತೆಗೆ ಆಹಾರ ಪಥ್ಯದ ಬಗ್ಗೆಯೂ ಕಾಳಜಿ ತೆಗೆದುಕೊಳ್ಳುತ್ತೀರಿ. ಸಮಯವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವಲ್ಲಿ ಯಶಸ್ಸು ಕಾಣುತ್ತೀರಿ. ಶುಭದಿನ 29. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ನಿಮ್ಮ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸುವವರ ಸಂಖ್ಯೆ ಹೆಚ್ಚಾಗುತ್ತದೆ. ವ್ಯಾಪಾರದಲ್ಲೂ ಮುಂದಿರುತ್ತೀರಿ. ಎದುರಾಗುವ ತೊಂದರೆಗಳನ್ನು ತಡೆಯುವ ಸಲುವಾಗಿ ಶ್ರಮ ಹಾಕುತ್ತೀರಿ. ವಿರೋಧಿ ಪಾಳಯದ ಪಿತೂರಿಯಿಂದ ಹಿನ್ನಡೆ ಅನುಭವಿಸಬೇಕಾಗುತ್ತದೆ. ಸದಾ ಜೊತೆಗೆ ಇರುವವರೇ ಕೆಲವು ವಿಚಾರಗಳಲ್ಲಿ ನಿಮ್ಮನ್ನು ನಿಂದಿಸುವ ಸಾಧ್ಯತೆ ಇದೆ. ಶುಭದಿನ 30. ಕಾಲಭೈರವನ ಸೇವೆ ಮಾಡಿರಿ.




ವಾರದ ಆರಂಭದಿಂದಲೇ ಹಲವು ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಬೇಕಾಗುತ್ತದೆ. ವ್ಯವಹಾರವನ್ನು ಬಹಳ ಎಚ್ಚರಿಕೆಯಿಂದ ನಿರ್ವಹಿಸಿ. ಈ ವಾರ ಸ್ವಲ್ಪ ಹೆಚ್ಚೇ ಹಣ ಖರ್ಚು ಮಾಡಬೇಕಾಗುತ್ತದೆ. ವ್ಯಾಪಾರದಲ್ಲಿ ನಿಮಗೆ ಅನುಕೂಲಕರ ಸನ್ನಿವೇಶ ಇರುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ವ್ಯಾಜ್ಯಗಳನ್ನು ಬಗೆಹರಿಸಿಕೊಳ್ಳಲು ಅವಕಾಶ ದೊರೆಯುತ್ತದೆ. ಶುಭದಿನ 01. ಈಶ್ವರನಿಗೆ ರುದ್ರಾಭಿಷೇಕ ಮಾಡಿಸಿ.




ಹೊಸ ಉತ್ಪನ್ನಗಳನ್ನು ಮಾರಾಟ ಮಾಡಲು ಸಕಾಲ. ಮದುವೆ ವಿಚಾರವಾಗಿ ಸಂಬಂಧಿಕರ ಜೊತೆಗೆ ಮಾತುಕತೆ ನಡೆಸಲಿದ್ದೀರಿ. ಈ ವಾರ ಹಲವು ತುರ್ತು ಕೆಲಸಗಳನ್ನು ಪೂರ್ಣಗೊಳಿಸುವಲ್ಲಿ ನಿಮ್ಮ ಗಮನ ಕೇಂದ್ರೀಕೃತವಾಗಿರುತ್ತದೆ. ಇದಕ್ಕಾಗಿ ಕೆಲವರ ಸಹಾಯ ಪಡೆಯುವ ಸಾಧ್ಯತೆ ಇದೆ. ವಾರದ ಕೊನೆ ಭಾಗವು ನಿಮಗೆ ಅನುಕೂಲಕರವಾಗಿ ಇರಲಿದೆ. ಶುಭದಿನ 02. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಿಂದಲೇ ಕೆಲಸಕ್ಕೆ ವೇಗ ನೀಡಲು ಪ್ರಯತ್ನ ಮಾಡುತ್ತೀರಿ. ನಿಮ್ಮ ಶ್ರಮಕ್ಕೆ ತಕ್ಕ ಪ್ರತಿಫಲವನ್ನು ಪಡೆಯಲಿದ್ದೀರಿ. ಇತರರ ಸಮಸ್ಯೆಗಳನ್ನು ಬಗೆಹರಿಸಲು ಹೊಸ ದಾರಿಗಳನ್ನು ಸೂಚಿಸುತ್ತೀರಿ. ನಿಮ್ಮ ಕೆಲಸ ಕಾರ್ಯಗಳಿಗೆ ಮಾಹಿತಿ ಕಲೆ ಹಾಕುತ್ತೀರಿ. ಈ ಅವಧಿಯಲ್ಲಿ ನಿಮ್ಮ ಆರೋಗ್ಯವು ಉತ್ತಮವಾಗಿ ಇರುತ್ತದೆ. ವ್ಯವಹಾರ ಲಾಭದಾಯಕವಾಗಿ ಇರುತ್ತದೆ. ಶುಭದಿನ 03. ಲಿಂಗಾಷ್ಟಕ ಪಠಣ ಮಾಡಿರಿ.




ನಿಮ್ಮ ವಿವೇಚನೆಯನ್ನು ಸಮರ್ಥವಾಗಿ ಬಳಸುವ ಮೂಲಕ ವ್ಯವಹಾರವನ್ನು ಇನ್ನಷ್ಟು ಉತ್ತಮವಾಗಿ ಮಾಡುತ್ತೀರಿ. ಇನ್ನು ಈ ಅವಧಿಯಲ್ಲಿ ಕುಟುಂಬ ಸದಸ್ಯರ ಬಗ್ಗೆ ಹೆಚ್ಚು ಗಮನ ನೀಡುತ್ತೀರಿ. ಉದ್ಯೋಗಸ್ಥರಿಗೆ ಉದ್ಯೋಗ ಸ್ಥಳದಲ್ಲಿ ಕಿರಿಕಿರಿಯ ಸನ್ನಿವೇಶ ಎದುರಾಗುತ್ತದೆ. ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ವಿರಾಮಕ್ಕೆ ನಿಮ್ಮದೇ ಸಮಯ ದೊರೆಯುತ್ತದೆ. ಶುಭದಿನ 02. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವೈಯಕ್ತಿಕ ಸಮಸ್ಯೆಗಳ ಬಗ್ಗೆ ಹೆಚ್ಚಿನ ಎಚ್ಚರಿಕೆ ವಹಿಸಿ. ಸಣ್ಣ ವಿಚಾರ ಕೂಡ ದೊಡ್ಡ ಬಿಕ್ಕಟ್ಟಾಗಿ ಎದ್ದು ನಿಲ್ಲುವ ಸಾಧ್ಯತೆ ಇದೆ. ಕೌಟುಂಬಿಕ ವಿಚಾರದಲ್ಲಿ ಪ್ರಗತಿ ಕಾಣುತ್ತದೆ. ವ್ಯಾಪಾರವನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಮಾಡುವುದಕ್ಕೆ ಅವಕಾಶ ದೊರೆಯುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಉತ್ತಮ ಹಾಗೂ ಅನುಕೂಲಕರವಾದ ಫಲಿತಾಂಶ ದೊರೆಯಲಿದೆ. ಶುಭದಿನ 01. ಸೌಂದರ್ಯ ಲಹರಿ ಪಠಿಸಿರಿ.




ವಾರದ ಮೊದಲ ಭಾಗದಿಂದಲೇ ಆರೋಗ್ಯವಾಗಿ ಇರುತ್ತೀರಿ. ರಾಜಕಾರಣಿಗಳಿಗೆ ಹೆಚ್ಚಿನ ಜವಾಬ್ದಾರಿ ವಹಿಸಿಕೊಳ್ಳಬೇಕಾಗುತ್ತದೆ. ವಾರದ ದ್ವಿತೀಯಾರ್ಧದಲ್ಲಿ ಖರೀದಿ ಮಾಡಬೇಕು ಎಂದುಕೊಂಡಿದ್ದ ಭೂಮಿಯೊಂದರ ಪರಿಶೀಲನೆ ನಡೆಸುವ ಸಾಧ್ಯತೆ ಇದೆ. ಉದ್ಯೋಗ ಕ್ಷೇತ್ರಕ್ಕೆ ಸಂಬಂಧಿಸಿದಂತೆ ವಾರದ ಅಂತ್ಯ ಭಾಗದಲ್ಲಿ ವರ್ಗಾವಣೆ ಆಗುವ ಸಾಧ್ಯತೆ ಇದೆ. ಶುಭದಿನ 02. ಲಕ್ಷ್ಮೀನಾರಾಯಣ ಹೃದಯ ಪಠಿಸಿರಿ.




ನಿಮ್ಮ ಕಾರ್ಯಗಳನ್ನು ವೇಗವಾಗಿ ಮಾಡಲಿದ್ದೀರಿ. ಈಗಿನ ಪರಿಸ್ಥಿತಿಯಲ್ಲಿ ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣ ಮಾಡಲು ಹೆಚ್ಚು ಹಣ ಖರ್ಚು ಮಾಡಬೇಕಾಗುತ್ತದೆ. ನಿಮ್ಮ ಮನಸಿನಲ್ಲಿ ಇರುವ ವಿಚಾರವನ್ನು ನೇರವಾಗಿ ಹೇಳಲು ಪ್ರಯತ್ನಿಸಿ. ಒಬ್ಬರು ಹೇಳುವುದನ್ನು ಮತ್ತೊಬ್ಬರು ಕೇಳಿಸಿಕೊಳ್ಳಲು ಸಿದ್ಧರಿಲ್ಲದ ಕಾರಣ ಸಮಸ್ಯೆ ದೊಡ್ಡದಾಗುತ್ತದೆ. ಶುಭದಿನ 30. ವಿಷ್ಣು ಸಹಸ್ರನಾಮ ಓದಿರಿ.




ಈ ವಾರ ಬಹಳ ಸಂತೋಷವಾಗಿ ಇರುತ್ತೀರಿ. ಉತ್ತಮ ಲಾಭ ಪಡೆಯುವ ಅವಕಾಶ ಇದೆ. ವಿದ್ಯಾರ್ಥಿಗಳಿಗೆ ಯಶಸ್ಸು ಪಡೆಯುವ ಅವಕಾಶಗಳು ದೊರೆಯಲಿವೆ. ನಿಮ್ಮ ಮಗ ಅಥವಾ ಮಗಳ ಮದುವೆಯ ವಿಚಾರವನ್ನು ಅಂತಿಮಗೊಳಿಸುವ ಅವಕಾಶ ಇದೆ. ಕ್ರೀಡಾ ಕ್ಷೇತ್ರದಲ್ಲಿ ಇರುವವರು ಅತ್ಯುತ್ತಮ ಸಾಧನೆ ಮಾಡಲು ಅವಕಾಶ ದೊರೆಯಲಿದೆ. ಶುಭದಿನ 29. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ನಿಮ್ಮ ಪಾಲಿಗೆ ದೊರೆಯುವ ಅವಕಾಶಗಳನ್ನು ಬಹಳ ಚೆನ್ನಾಗಿ ಬಳಸಿಕೊಳ್ಳಲಿದ್ದೀರಿ. ನಿಮ್ಮ ಪೋಷಕರಿಗೆ ಹೆಚ್ಚಿನ ಗೌರವ ನೀಡುತ್ತೀರಿ. ನಿಮ್ಮ ಆದಾಯ ಉತ್ತಮವಾಗಿರುತ್ತದೆ. ಸಾಮಾಜಿಕವಾಗಿ ಗೌರವ ಮನ್ನಣೆಗಳನ್ನು ಪಡೆಯಲಿದ್ದೀರಿ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ನಿರೀಕ್ಷಿತವಾದ ಯಶಸ್ಸು ದೊರೆಯಲಿದೆ. ವಾರದ ಅಂತ್ಯಕ್ಕೆ ಓಡಾಟ ಹೆಚ್ಚಾಗಿ ಮಾಡಬೇಕಾಗುತ್ತದೆ. ಶುಭದಿನ 02. ಸುಬ್ರಮಣ್ಯ ಜಪ ಮಾಡಿರಿ.




ಸಣ್ಣ ಪ್ರವಾಸ ಮಾಡಬೇಕಾಗಿ ಬರುತ್ತದೆ. ಮನೆ ಹಾಗೂ ಕುಟುಂಬದ ಬಗ್ಗೆ ಹೆಚ್ಚು ಯೋಚನೆ ಮಾಡಲಿದ್ದೀರಿ. ವಿದ್ಯಾರ್ಥಿಗಳಿಗೆ ಪ್ರಗತಿ ಇದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಆದಾಯದಲ್ಲಿ ಹೆಚ್ಚಳ ಆಗುತ್ತದೆ. ಸಾಮಾಜಿಕ ಹಾಗೂ ಆರ್ಥಿಕ ಸ್ಥಾನಮಾನ ಹೆಚ್ಚಾಗಲಿದೆ. ಆತ್ಮೀಯರಿಗೆ ಉಡುಗೊರೆಗಳನ್ನು ನೀಡುವ ಸಾಧ್ಯತೆ ಇದೆ. ಕೆಲಸಗಳಲ್ಲಿ ಪ್ರಗತಿ ಕಾಣಿಸುತ್ತದೆ. ಶುಭದಿನ 02. ಶ್ರೀದುರ್ಗಾ ಆರಾಧನೆ ಮಾಡಿರಿ.